**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 62(107)
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 13.02.2023
ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ). | ಕಟ್ಟಡ ಸುರಕ್ಷಾ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳು ಖಾಸಗಿ ಶಾಲೆಯವರು ಮಾತ್ರ ನೀಡಬೇಕಾಗಿದ್ದು, ಈ ನಿಯಮವು ಸರ್ಕಾರಿ ಶಾಲೆಗಳಿಗೆ ಅನ್ವಯಿಸುವುದಿಲ್ಲವೇ; | ಸರ್ಕಾರಿ ಶಾಲೆಗಳನ್ನು ಸರ್ಕಾರವೇ ನಡೆಸುತ್ತಿರುವುದರಿಂದ ಈ ಶಾಲೆಗಳು ಕಟ್ಟಡ ಮತ್ತು ಅಗ್ನಿ ಸುರಕ್ಷತೆ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಆದರೆ, ಸದರಿ ಶಾಲೆಗಳ ಮೇಲುಸ್ತುವಾರಿಗಳನ್ನು ಅಂದರೆ, ಕಟ್ಟಡ ಸುರಕ್ಷತೆ ಬಗ್ಗೆ ಲೋಕೋಪಯೋಗಿ / ಗ್ರಾಮೀಣಾಭಿವೃದ್ಧಿ ಇಲಾಖೆ ವತಿಯಿಂದ ಪರಿಶೀಲಿಸಿ ಆಗಿಂದಾಗಲೇ ದುರಸ್ಥಿ ಕಾರ್ಯವನ್ನು ಆ ಇಲಾಖೆಗಳ ಮೇಲ್ವಿಚಾರಣೆಯಲ್ಲಿ ನಡೆಸುತ್ತಿರುವುದರಿಂದ ಪ್ರಮಾಣ ಪತ್ರಗಳನ್ನು ಪಡೆದಿರುವುದಿಲ್ಲ. ಹಾಗೆಯೇ ಸರ್ಕಾರಿ ಶಾಲೆಗಳಿಗೆ ಸರ್ಕಾರದ ಅಧೀನದಲ್ಲೇ ಇರುವ ಅಗ್ನಿ ಶಾಮಕ ಇಲಾಖೆಯು (ಅಗ್ನಿ ಶಾಮಕ ಮತ್ತು ಒಳನಾಡು ಇಲಾಖೆ) ಆಗಿಂದಾಗೇ ಪರಿಶೀಲಿಸಿ ಅಗ್ನಿ ಅವಘಡ ಸಂಭವಿಸುವ ಬಗ್ಗೆ ಏನಾದರೂ ಲೋಪದೋಷ ಗಳಿದ್ದಲ್ಲಿ ಅವುಗಳನ್ನು ಸರಿಪಡಿಸಿಕೊಳ್ಳಲು ಸಂಬಂಧಪಟ್ಟ ಶಾಲೆಯ ಮುಖ್ಯ ಶಿಕ್ಷಕರಿಗೆ ತಿಳಿಸುವುದರಿಂದ ಈ ಇಲಾಖೆಯಿಂದ ಪ್ರಮಾಣ ಪತ್ರವನ್ನು ಪಡೆದಿರುವುದಿಲ್ಲ. |
| ಆ) | ಕಟ್ಟಡ ಸುರಕ್ಷಾ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಯಾವ ಯಾವ ಇಲಾಖೆಗಳಿಂದ ಅನುಮತಿ ಪಡೆಯಬೇಕಾಗಿದೆ ಹಾಗೂ ಇದಕ್ಕೆ ಇರುವ ಮಾನದಂಡಗಳೇನು; (ವಿವರ ಒದಗಿಸುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 43 ಪಿಜಿಸಿ 2022, ದಿನಾಂಕ: 18.05.2022 ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಲೋಇ/59/ಬಿಇಡಿ-2019, ದಿನಾಂಕ: 06.05.2022 ಮತ್ತು ಸ್ಥಾಯಿ ಆದೇಶ ಸಂಖ್ಯೆ:156-ಎ ರ ಸಂಖ್ಯೆ: ಜಬಿಸಿ(2)044-2020-21, ದಿನಾಂಕ:25-01-2022 ರಲ್ಲಿ ಕ್ರಮವಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಲೋಕೋಪಯೋಗಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಗಳು ಹೊರಡಿಸಿರುವ ಮಾರ್ಗಸೂಚಿಯಲ್ಲಿನ ನಿಯಮಗಳಂತೆ ಪ್ರಮಾಣ ಪತ್ರಗಳನ್ನು ಪಡೆಯಬಹುದಾಗಿದೆ. |
| ಇ) | ಕಟ್ಟಡ ಸುರಕ್ಷಾ ಪ್ರಮಾಣ ಪತ್ರ ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಒದಗಿಸುವುದು ಖಾಸಗಿ ಶಾಲೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನಿಯಮವನ್ನು ಸರಳಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | |

ಸಂಖ್ಯೆ: ಇಪಿ 63 ಪಿಜಿಸಿ 2023

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.